## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಚನ್ನನರಸಿಂಹಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಲಿಂಗಸುಗೂರು ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ.

ಓದಲಾಗಿದೆ:1) ಸರ್ಕಾರದ ಕಾರಣ ಕೇಳುವ ಸಂಖ್ಯೆ: ಗ್ರಾಅಪ 16 ವಿಸೇಚಿ 2013, ದಿನಾಂಕ: 18-03-2013

2) ಶ್ರೀ ಚನ್ನನರಸಿಂಹಪ್ಪ, ಇವರ ಲಿಖಿತ ಹೇಳಿಕೆಗಳು

3) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 16 ವಿಸೇಚಿ 2013, ದಿನಾಂಕ: 07-02-2015.

4) ಶ್ರೀ ಹೆಚ್. ಪಿ. ದೇವೇಂದ್ರಯ್ಯ, ಇವರ ಪತ್ರ ದಿನಾಂಕ:24-02-2015.

### ಪ್ರಸ್ತಾವನೆ:

ಶ್ರೀ ಚನ್ನನರಸಿಂಹಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಲಿಂಗಸುಗೂರು ಇವರು ಸದರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಲಿಂಗಸುಗೂರು ತಾಲ್ಲೂಕಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಕೈಗೊಳ್ಳಲಾದ ಕಾಮಗಾರಿಗಳಿಗೆ ನಾಮಫಲಕಗಳನ್ನು ಅಳವಡಿಸುವ ಕಾರ್ಯಕ್ಕಾಗಿ ಆ ನಾಮಫಲಕಗಳ ಖರೀದಿಯಲ್ಲಿ ಪಾರದರ್ಶಕ ನಿಯಮಗಳನ್ನು ಉಲ್ಲಂಘನೆ ಮಾಡಿರುವುದು, ಸಂಪೂರ್ಣ ನೈರ್ಮಲ್ಯ ಆಂದೋಲನ ಕಾರ್ಯಕ್ರಮದಡಿ ತರಬೇತಿ ನೀಡುವ ಸಂಸ್ಥೆಗೆ ನಿಯಮಬಾಹಿರವಾಗಿ ರೂ. 1,03,775/-ಗಳನ್ನು ಪಾವತಿ ಮಾಡಿರುವುದು, ಸ್ವರ್ಣ ಜಯಂತಿ ಗ್ರಾಮ ಸ್ವರಾಜ್ ಯೋಜನೆಯಡಿ ತರಬೇತುದಾರರಿಗೆ ಭತ್ಯೆಯನ್ನು ಪಾವತಿಸುವಾಗ ನಿಯಮಗಳನ್ನು ಪಾಲನೆ ಮಾಡದಿರುವುದು, ಹಾಗೂ 12ನೇ ಹಣಕಾಸು ಯೋಜನೆಯಡಿ ಕ್ರಿಡಾ ಸಾಮಗ್ರಿ ಮತ್ತು ಕಛೇರಿ ಉಪಯೋಗಕ್ಕಾಗಿ ಪೀಠೋಪಕರಣ ಖರೀದಿಯಲ್ಲಿ ಪಾರದರ್ಶಕ ನಿಯಮ ಉಲ್ಲಂಘಿಸಿರುವುದು, ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತಿ ರಾಯಚೂರು ರವರಿಗೆ ತನಿಖೆಗೆ ಅವಶ್ಯವಿರುವ ದಾಖಲೆಗಳನ್ನು ಮತ್ತು ವಿವರಗಳನ್ನು ಸಲ್ಲಿಸದೇ ಕರ್ತವ್ಯಲೋಪವೆಸಗಿರುವ ಆರೋಪಗಳಿಗೆ ಸಂಬಂಧಿಸಿದಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ)-ನಿಯಮಾವಳಿ 1957 ರ ನಿಯಮ 11 ರಡಿಯಲ್ಲಿ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು (ಅನುಬಂಧ 1 ರಿಂದ 4) ಜಾರಿ ಮಾಡಲಾಗಿತ್ತು. ಸದರಿ ನೋಟೀಸಿಗೆ ಅಪಾದಿತ ಅಧಿಕಾರಿಯು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಲಿಖಿತ ಹೇಳಿಕೆಗಳನ್ನು ಸಲ್ಲಿಸಿ ತಮ್ಮ ವಿರುದ್ಧದ ಆರೋಪಗಳನ್ನು ನಿರಾಕರಿಸಿರುತ್ತಾರೆ. ಆಪಾದಿತರು ಸಲ್ಲಿಸಿರುವ ಲಿಖಿತ ಹೇಳಿಕೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಅವರ ಲಿಖಿತ ಹೇಳಿಕೆಗಳನ್ನು ಒಪ್ಪಲು ಸಮರ್ಥನೀಯವಾದ ಅಂಶಗಳು ಕಂಡು ಬಾರದ ಕಾರಣ ಸದರಿ ಅಧಿಕಾರಿ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಇಲಾಖಾ ವಿಚಾರಣೆಯನ್ನು ಜರುಗಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಆದೇಶದಲ್ಲಿ ಶ್ರೀ ಹೆಚ್. ಪಿ. ದೇವೇಂದ್ರಯ್ಯ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯಾಗಿ ನೇಮಿಸಲಾಯಿತು. ಸದರಿಯವರು ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಪತ್ರದಲ್ಲಿ ತಮ್ಮ ಆರೋಗ್ಯ ಸರಿ ಇಲ್ಲದೇ ಇರುವುದರಿಂದ ವಿಚಾರಣೆಯನ್ನು ನಡೆಸಲು ಸಾಧ್ಯವಿಲ್ಲವೆಂದು ತಿಳಿಸಿರುತ್ತಾರೆ. ಆದ್ದರಿಂದ ಪ್ರಕರಣದ ಇಲಾಖಾ ವಿಚಾರಣೆ ನಡೆಸಲು ಬೇರೊಬ್ಬ ವಿಚಾರಣಾಧಿಕಾರಿಯನ್ನು ನೇಮಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 16 ವಿಸೇಚಿ 2013 ಬೆಂಗಳೂರು ದಿನಾಂಕ:25-05-2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಚನ್ನನರಸಿಂಹಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಲಿಂಗಸುಗೂರು ಇವರ ವಿರುದ್ಧ ಮಾಡಲಾದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು, ಶ್ರೀ ಹೆಚ್.ಪಿ. ದೇವೇಂದ್ರಯ್ಯ, ನಿವೃತ್ತ

ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರ ಬದಲಿಗೆ ಶ್ರೀ ಎಂ.ಎಸ್. ಹೆಗ್ಡೆ ನಾಗ್ರೆ ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತಿ, ರಾಯಚೂರು ಇವರನ್ನು ಶಿಸ್ತು ಪ್ರಾಧಿಕಾರದ ಪರವಾಗಿ ಮಂಡನಾಧಿಕಾರಿಯಾಗಿ ಮುಂದುವರೆದಿರುತ್ತಾರೆ.

ವಿಚಾರಣಾಧಿಕಾರಿಯವರು ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನ ಪ್ರಕಾರ ವಿಚಾರಣೆ ಜರುಗಿಸಿ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ) ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/45/ ಸೇಇವಿ/2014 ದಿನಾಂಕ: 08-01-2015ರನ್ವಯ ವಾಹನ ಭತ್ಯೆಯೂ ಸೇರಿದಂತೆ ರೂ. 15,000/- ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಬಿ &ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ)/ರಾಯಚೂರು
3. ಶ್ರೀ ಎಂ. ಎಸ್. ಹೆಗ್ಡೆ ನಾಗ್ರೆ, ನಿವೃತ್ತ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು ಟಿ.ಎಫ್-4, ಸೂರ್ಯ ಕ್ಲಾಸಿಕ್, 4ನೇ ಮೇನ್, ರಾಮಮಂದಿರ ಬೀದಿ ಹತ್ತಿರ, ಯಲಚೇನಹಳ್ಳಿ ಬಸ್ ನಿಲ್ದಾಣ, ಕನಕಪುರ, ರಸ್ತೆ, ಜೆ.ಪಿ. ನಗರ ಅಂಚೆ, ಬೆಂಗಳೂರು-78, (ಮೊ.ನಂ. 9449747187).
4. ಶ್ರೀ ಹೆಚ್.ಪಿ. ದೇವೇಂದ್ರಯ್ಯ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಮನೆ ನಂ.122, 22ನೇ ಕ್ರಾಸ್, ಜ್ಯುಡಿಶಿಯಲ್ ಲೇಔಟ್, ಜಿಕೆವಿಕೆ ಪೋಸ್ಟ್, ಯಲಹಂಕ, ಬೆಂಗಳೂರು-65 , (ಮೊ.ನಂ. 9845750360)
5. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ರಾಯಚೂರು ( ಮಂಡನಾಧಿಕಾರಿ)
6. ಆಪಾದಿತ ಅಧಿಕಾರಿ/ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಯಚೂರು ಇವರ ಮುಖಾಂತರ)

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

GO